# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 80(50) |
| ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 04.03.2025 |
| ಉತ್ತರಿಸಬೇಕಾದವರು | : | ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಮೈಸೂರು, ಮಂಗಳೂರು, ಹುಬ್ಬಳ್ಳಿ-ಧಾರವಾಡ, ಬೆಳಗಾವಿ ಕಲಬುರಗಿ, ಕೆ.ಜಿ.ಎಫ್ ತುಮಕೂರಿನ ವಸಂತನರಸಾಪುರ ಮತ್ತು ಬಳ್ಳಾರಿ ನಗರಗಳ ಸಮೀಪದಲ್ಲಿ ಇಂಟಿಗ್ರೇಟೆಡ್ ಟೌನ್‌ಶಿಪ್‌ಗಳನ್ನು ಅಭಿವೃದ್ಧಿಪಡಿಸಲು ಈ ಹಿಂದೆ ಆಯ-ವ್ಯಯದಲ್ಲಿ ಘೋಷಿಸಿದ್ದು, ಸದರಿ ಕಾಮಗಾರಿಯ ಪ್ರಸ್ತುತ ಹಂತವೇನು; | ಮಾನ್ಯ ಮುಖ್ಯಮಂತ್ರಿಗಳು 2024-25 ನೇ ಸಾಲಿಗೆ ಮಂಡಿಸಿದ ಆಯವ್ಯಯದ ಕಂಡಿಕೆ-270(ಡಿ) ರಲ್ಲಿ ಘೋಷಿಸಿದಂತೆ ಮೈಸೂರು, ಮಂಗಳೂರು, ಹುಬ್ಬಳ್ಳಿ-ಧಾರವಾಡ, ಬೆಳಗಾವಿ ಕಲಬುರಗಿ, ಕೆ.ಜಿ.ಎಫ್, ತುಮಕೂರಿನ ವಸಂತನರಸಾಪುರ ಮತ್ತು ಬಳ್ಳಾರಿ ನಗರಗಳ ಸಮೀಪದಲ್ಲಿ ಸಮಗ್ರ ಟೌನ್‌ಶಿಪ್ ಗಳನ್ನು ಸ್ಥಾಪಿಸಲು ಕೆ.ಯು.ಐ.ಡಿ.ಎಫ್.ಸಿ ಸಂಸ್ಥೆಯನ್ನು ನೋಡಲ್ ಏಜೆನ್ಸಿಯಾಗಿ ನೇಮಿಸಿ ಮತ್ತು ಸಮಗ್ರ ಟೌನ್‌ಶಿಪ್ ಗಳ ತಾಂತ್ರಿಕ ಅಂಶಗಳ ಪರಿಶೀಲನೆಯನ್ನು ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ರವರಿಗೆ ವಹಿಸಿ ಸರ್ಕಾರದ ಆದೇಶ ಸಂಖ್ಯೆ: ನಅಇ 129 ಎಂ.ಎಲ್.ಆರ್. 2024, ದಿನಾಂಕ:14.06.2024 ರಲ್ಲಿ ಸರ್ಕಾರದ ತಾತ್ವಿಕ ಅನುಮೋದನೆ ನೀಡಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಆರ್.ಡಿ. 22 ಎಲ್‌ಜಿಕೆ 2019(ಇ), ದಿನಾಂಕ:26.12.2023 ರಲ್ಲಿ ಕೋಲಾರ ಜಿಲ್ಲೆ ಕೆ.ಜಿ.ಎಫ್. ತಾಲ್ಲೂಕಿನ, ಬಂಗಾರದ ಗಣಿ ಗ್ರಾಮದ ಸ.ನಂ. 3 ರಲ್ಲಿನ 294 ಎಕರೆ ಜಮೀನನ್ನು ನಗರಾಭಿವೃದ್ಧಿ ಇಲಾಖೆಯು ಅಭಿವೃದ್ಧಿಪಡಿಸುವ ಇಂಟಿಗ್ರೇಟೆಡ್ ಟೌನ್‌ಶಿಪ್ ಗಾಗಿ ಮಾತ್ರ ಮೀಸಲಿಸಿರಿ ಆದೇಶಿಸಲಾಗಿರುತ್ತದೆ.<br><br>ರಾಜ್ಯದಲ್ಲಿ ಮೈಸೂರು, ಮಂಗಳೂರು, ಹುಬ್ಬಳ್ಳಿ-ಧಾರವಾಡ, ಬೆಳಗಾವಿ, ಕಲಬುರಗಿ, ಕೆ.ಜಿ.ಎಫ್., ತುಮಕೂರಿನ ವಸಂತನರಸಾಪುರ |
| ಆ) | ಈ ಇಂಟಿಗ್ರೇಟೆಡ್ ಟೌನ್ ಶಿಪ್ ಗಳನ್ನು ಅಭಿವೃದ್ಧಿ ಪಡಿಸುವ ಕಾಮಗಾರಿಗೆ ಸ್ಥಳ ಮತ್ತು ವಿಸ್ತೀರ್ಣವನ್ನು ಗುರುತಿಸಲಾಗಿದೆಯೇ; ಗುರುತಿಸಿದ್ದಲ್ಲಿ, ಸದರಿ ಕಾಮಗಾರಿಗಳಿಗೆ ಟೆಂಡರ್ ಕರೆದು ಗುತ್ತಿಗೆದಾರರನ್ನು ಆಯ್ಕೆ ಮಾಡಲಾಗಿದೆಯೇ: (ವಿವರಗಳನ್ನು ಒದಗಿಸುವುದು) | |
| ಇ) | ಸದರಿ ಯೋಜನೆಗೆ ಖರ್ಚಾಗಲಿರುವ ಅಂದಾಜು ಮೊತ್ತ ಎಷ್ಟು? (ಯೋಜನಾವಾರು ಮಾಹಿತಿ ನೀಡುವುದು) | |

| | | |
|---|---|---|
| | | ಮತ್ತು ಬಳ್ಳಾರಿ ನಗರಗಳ ಸಮೀಪದಲ್ಲಿ ಇಂಟಿಗ್ರೇಟೆಡ್ ಟೌನ್‌ಶಿಪ್‌ಗಳನ್ನು ಪಿಪಿಪಿ ಮಾದರಿಯಲ್ಲಿ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದ್ದು, ಈ ಯೋಜನೆಗೆ Feasibility Study, Market Assessment ಮತ್ತು Preparation of Financial Models ಇವುಗಳನ್ನು ಸಿದ್ಧಪಡಿಸಲು ಸಮಾಲೋಚಕರ ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿದೆ.<br><br>ಸದರಿ ಇಂಟಿಗ್ರೇಟೆಡ್ ಟೌನ್‌ಶಿಪ್‌ಗಳನ್ನು ಅನುಷ್ಠಾನಗೊಳಿಸುವ ಸಂಬಂಧ The Karnataka Integrated Township Rules, 2024 ಕರಡನ್ನು ಸಿದ್ಧಪಡಿಸಲಾಗಿದ್ದು, ಈ ಸಂಬಂಧ ಕಾನೂನು ಇಲಾಖೆ, ಆರ್ಥಿಕ ಇಲಾಖೆ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆಗಳು ನೀಡಿದ ಅಭಿಪ್ರಾಯದ ಹಿನ್ನಲೆಯಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಗೆ Integrated Township ನ್ನು ಸೇರ್ಪಡೆಗೊಳಿಸಿ ತಿದ್ದುಪಡಿ ತರುವ ಬಗ್ಗೆ ಪರಿಶೀಲನೆಯಲ್ಲಿರುತ್ತದೆ. |

**ಸಂಖ್ಯೆ: ನಅಇ 67 ಬೆಂರೂಪ್ರಾ 2025 (ಇ-ಕಡತ)**

(**ಬಿ.ಎಸ್. ಸುರೇಶ**)
ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು